ಶ್ರೀ ಆರ್.ವಿ. ದೇಶ್‌ಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು):

ಅ) ಕೊಪ್ಪಳ ಜಿಲ್ಲೆಯಲ್ಲಿ 11 ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು ಇರುತ್ತವೆ.

ಆ) ಕೈಗಾರಿಕಾ ಘಟಕಗಳು ಸರೋಜಿನಿ ಮಹಿಷಿ ವರದಿ ಪ್ರಕಾರ ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸಬೇಕಾಗಿರುತ್ತದೆ, ಸ್ಥಳೀಯ ಕನ್ನಡಿಗರಿಗೆ ಉದ್ಯೋಗವನ್ನು ನೀಡಿರುವ ಬಗ್ಗೆ ಕಾಲಕಾಲಕ್ಕೆ ಪರಿಶೀಲನೆ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡಿರುವುದು ಕಡಿಮೆ ಇದ್ದಲ್ಲಿ ಘಟಕದವರ ಜೊತೆ ಮಾತುಕತೆ ನಡೆಸಿ ಸ್ಥಳೀಯರಿಗೆ ಉದ್ಯೋಗ ನೀಡುವುದನ್ನು ಉತ್ತಮಗೊಳಿಸಲು ತಿಳಿಸಿ ಪರಿಶೀಲಿಸಲಾಗುವುದು.

ಇ) ಇದರಲ್ಲಿ ಹೆಚ್ಚಿನ ಕೈಗಾರಿಕೆಗಳು ಉಕ್ಕು ಮತ್ತು ಬೀಗು ಕಬ್ಬಿಣ ಉತ್ಪನ್ನ ಮಾಡುತ್ತಿರುತ್ತವೆ. ಭಾರೀ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಸಹಾಯ ಧನ ನೀಡುವ ಯೋಜನೆ ಇರುವುದಿಲ್ಲ.

ಈ) ಎಲ್ಲಾ ಕೈಗಾರಿಕಾ ಘಟಕಗಳು ಸ್ಥಾಪನೆಗಾಗಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ನೀರು ಮತ್ತು ಗಾಳಿ ಮಾಲಿನ್ಯದ ಬಗ್ಗೆ ಪರವಾನಗಿ ಪಡೆಯಬೇಕಾಗಿರುತ್ತದೆ. ಕೆಲವೊಂದು ನಿರ್ದಿಷ್ಟ ಕೈಗಾರಿಕಾ ಘಟಕಗಳು ಪರಿಸರ ಮಾಲಿನ್ಯ ಪರವಾನಿಗೆ: ಮಂಜೂರಾತಿಯನ್ನು ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಸಮಿತಿ / ಕೇಂದ್ರ ಸರ್ಕಾರದ ಪರಿಸರ ಮಾಲಿನ್ಯ ಮಂತ್ರಾಲಯದಿಂದ ಚಟುವಟಿಕೆ ಹಾಗೂ ಬಂಡವಾಳ ಆಧಾರದ ಮೇಲೆ ಪಡೆಯಬೇಕಾಗಿರುತ್ತದೆ.

ರಾಜ್ಯದ ವಸತಿ ನಿಲಯಗಳಲ್ಲಿ ಸ್ಥಳೀಯ ಅಭ್ಯರ್ಥಿಗಳಿಗೆ ನೇಮಕಾತಿಯಲ್ಲಿ ಆಗಿರುವ ಅನ್ಯಾಯದ ಬಗ್ಗೆ

3099 (3463) : ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ವಸತಿ ನಿಲಯಗಳಲ್ಲಿ ಅಡಿಗೆ ಸಹಾಯಕರು, ಕಾವಲುಗಾರರನ್ನು ನೇಮಕಾತಿ ಮಾಡಿದ್ದು, ಸ್ಥಳೀಯ ಜಿಲ್ಲೆಯವರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಕೈಗೊಂಡ ಕ್ರಮವೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಸ್ಥಳೀಯ ಜಿಲ್ಲೆಯ ಅಭ್ಯರ್ಥಿಗಳಿಗೆ ನೇಮಕಾತಿ ಸೀಮಿತಗೊಳಿಸಲು ನಿಯಮ ಇರುವುದಿಲ್ಲ.

ಆ) ಅನ್ವಯವಾಗುವುದಿಲ್ಲ.

ಸವದತ್ತಿ ತಾಲ್ಲೂಕಿನ ಶ್ರೀ ಕ್ಷೇತ್ರ ಸೂಗಲದಲ್ಲಿ ಮತ್ಸ್ಯಾಲಯವನ್ನು ಪೂರ್ಣಗೊಳಿಸುವುದು

3100 (3432) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಶ್ರೀಕ್ಷೇತ್ರ ಸೂಗಲದಲ್ಲಿ ಅರ್ಧಕ್ಕೆ ನಿಂತಿರುವ ಮತ್ಸ್ಯಾಲಯ ಕಟ್ಟಡವನ್ನು ಹಾಗೂ ಮತ್ಸ್ಯಾಲಯಕ್ಕೆ ಅವಶ್ಯವಿರುವ ಎಲ್ಲಾ ಸೌಕರ್ಯಗಳನ್ನು ಪೂರೈಸಲು ಕ್ರಮ ಕೈಗೊಳ್ಳಲಾಗುವುದೇ:

ಆ) ಯಾವಾಗ ಈ ಕೆಲಸವನ್ನು ಪೂರ್ಣ ಮುಗಿಸಲಾಗುವುದು:

ಇ) ಈ ಕಟ್ಟಡವನ್ನು ಪೂರ್ಣ ಮುಗಿಸಲು ಹಾಗೂ ಅದಕ್ಕೆ ಅವಶ್ಯವಿರುವ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಹಣಕಾಸಿಗಾಗಿ ಯಾವ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ?

ಶ್ರೀ ವಸಂತ ವಿ ಸಾಲಿಯಾನ (ಮೀನುಗಾರಿಕೆ ಹಾಗು ಬಂದರು ರಾಜ್ಯ ಸಚಿವರು):

ಅ) ಈ ಮತ್ಸ್ಯಾಲಯ ಕಟ್ಟಡವನ್ನು ಬೆಳಗಾವಿ ಜಿಲ್ಲಾ ಪಂಚಾಯತಿಯಿಂದ ಪಶ್ಚಿಮ ಘಟಗಳ್ಳ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾಗುತ್ತಿದೆ. ಪೂರಕ ಸೌಕರ್ಯಗಳಾದ ಅಕ್ವೇರಿಯಂಗಳ ಅಳವಡಿಕೆ, ವಿದ್ಯುತ್ ಹಾಗೂ ನೀರಿನ ವ್ಯವಸ್ಥೆಗಳನ್ನು ಜಿಲ್ಲಾ ವಲಯದಲ್ಲಿ ಅನುದಾನದ ಲಭ್ಯತೆಗೆ ಅನುಸಾರವಾಗಿ ಪೂರ್ಣಗೊಳಿಸಲು ಜಿಲ್ಲಾ ಪಂಚಾಯತ್‌ಯಿಂದ ಕ್ರಮ ಕೈಗೊಳ್ಳಲಾಗುವುದು.

ಆ) ಜಿಲ್ಲಾ ವಲಯದಲ್ಲಿ ಸಾಕಷ್ಟು ಅನುದಾನ ಒದಗಿಸಿದಾಗ ಈ ಕೆಲಸವನ್ನು ಪೂರ್ಣಗೊಳಿಸಲಾಗುವುದು

ಇ) ಈ ಮತ್ಸ್ಯಾಗಾರವನ್ನು ಬೆಳಗಾವಿ ಜಿಲ್ಲಾ ಪಂಚಾಯತ್‌ನಿಂದ ನಿರ್ಮಿಸಲಾಗುತ್ತಿರುವುದರಿಂದ ಸರ್ಕಾರದಿಂದ ವಿಶೇಷ ಕಾರ್ಯಕ್ರಮ ಹಮ್ಮಿಕೊಂಡಿಲ್ಲ.

ಬೈಲಹೊಂಗಲ ಅಂತರ್ಜಲ ಹೆಚ್ಚಿಸಲು ಕ್ರಮ ಕೈಗೊಳ್ಳುವುದು

3101 (3433) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಂತರ್ಜಲ ಹೆಚ್ಚಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ;

ಆ) ಬೆಳಗಾವಿ ಜಿಲ್ಲೆಯಲ್ಲಿ ಅಂತರ್ಜಲ ಹೆಚ್ಚಿಸಲು ಯಾವ ವಿಶೇಷವಾದ ಕ್ರಮ ಕೈಗೊಳ್ಳಲಾಗಿದೆ;

ಇ) ಬೆಳಗಾವಿ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಅಂತರ್ಜಲ ಹೆಚ್ಚಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ವಿ ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು):

ಅ) ರಾಜ್ಯದಾದ್ಯಂತ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಇಲಾಖೆಯು ಕೃತಕ ಮರು ಪೂರೈಕೆ ರಚನೆಗಳನ್ನು ನಿರ್ಮಾಣ ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಂಡು ಕ್ಲಿಷ್ಟಕರವಾದ ಪ್ರದೇಶಗಳಲ್ಲಿ ವಿವಿಧ ಅಂತರ್ಜಲ ಇದುವರೆಗೆ ಒಟ್ಟು 1091 ಸಂಖ್ಯೆಯ ರಚನೆಗಳನ್ನು ನಿರ್ಮಾಣ ಮಾಡಲಾಗಿದೆ.

ಆ) ಬೆಳಗಾಂ ಜಿಲ್ಲೆಯಲ್ಲಿ ಜಲಸಂಪನ್ಮೂಲ ಕ್ರೋಢೀಕರಣ ಯೋಜನೆಯಡಿಯಲ್ಲಿ ರೂ. 4,717.80 ಲಕ್ಷ ವೆಚ್ಚದಲ್ಲಿ 5,979 ಸಂಖ್ಯೆಯ ವಿವಿಧ ರಚನೆಗಳನ್ನು ನಿರ್ಮಾಣ ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಇ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿ ಅಂತರ್ಜಲ ಹೆಚ್ಚಿಸಲು ಆರ್‌ಎಇ ಯೋಜನೆಯಡಿಯಲ್ಲಿ ಒಟ್ಟು 5 ಚೆಕ್ ಡ್ಯಾಂ ಮತ್ತು 10 ಇಂಗು ಬಾವಿಗಳನ್ನು ನಿರ್ಮಾಣ ಮಾಡಲಾಗಿದೆ. ಸವದತ್ತಿಯಲ್ಲಿ ಯಾವುದೇ ರಚನೆಗಳನ್ನು ನಿರ್ಮಾಣ ಮಾಡಿರುವುದಿಲ್ಲ.

ಅಲ್ಲದೆ, ಜಲಸಂಪನ್ಮೂಲ ಕ್ರೋಢೀಕರಣ ಯೋಜನೆಯಡಿಯಲ್ಲಿ ಬೈಲಹೊಂಗಲ ತಾಲ್ಲೂಕಿನಲ್ಲಿ ರೂ. 753.40 ಲಕ್ಷ ವೆಚ್ಚದಲ್ಲಿ 983 ಸಂಖ್ಯೆ ವಿವಿಧ ರಚನೆಗಳನ್ನು ಹಾಗೂ ಸವದತ್ತಿ ತಾಲ್ಲೂಕಿನಲ್ಲಿ ರೂ. 1040.60 ಲಕ್ಷ ವೆಚ್ಚದಲ್ಲಿ 1336 ಸಂಖ್ಯೆಯ ರಚನೆಗಳನ್ನು ನಿರ್ಮಾಣ ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಆರ್ಥಿಕ ನೆರವಿಗಾಗಿ ವಿಶ್ವಬ್ಯಾಂಕಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.